**ಸಾಕ್ಷಿಗೆ ದಿನಾಂಕಃ10-03-2026 ರಂದು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**:: ಪಾಟೀ ಸವಾಲು :: 1 ರಿಂದ 3, 6 ಮತ್ತು 7 ನೇ ಪ್ರತಿವಾದಿಗಳ ಪರ ಶ್ರೀ.AA ವಕೀಲರಿಂದ ::**

ದಾವಾ ಐಟಂ ನಂಬರ್ 1 ರಿಂದ 7 ಆಸ್ತಿಗಳು ನಮ್ಮ ಒಟ್ಟು ಕುಟುಂಬದ ಆಸ್ತಿಗಳಾಗಿರುತ್ತವೆ ಎಂದರೆ ಸರಿ. ನಂತರದಲ್ಲಿ ನಾನು ಸೇರ್ಪಡೆ ಮಾಡಿರುವ 6 ಮತ್ತು 7 ನೇ ಪ್ರತಿವಾದಿಗಳ ಹೆಸರಿನಲ್ಲಿ ಇರುವ ಆಸ್ತಿಗಳು ಅವರ ತವರು ಮನೆಯಿಂದ ಅವರಿಗೆ ಬಂದ ಆಸ್ತಿ ಎಂದರೆ ಸರಿ. ಸದರಿ ಆಸ್ತಿಗಳು ನಮ್ಮ ಒಟ್ಟು ಕುಟುಂಬದ ಆಸ್ತಿ ಆಗಿರುವುದಿಲ್ಲ ಎಂದರೆ ಸರಿ. 1 ನೇ ಪ್ರತಿವಾದಿ ಹಿಂದೆ KSRTC ಯಲ್ಲಿ ಕೆಲಸ ಮಾಡುತ್ತಿದ್ದರು ಎಂದರೆ ಸರಿ. 1 ನೇ ಪ್ರತಿವಾದಿಗೆ ಅವರ ಕೆಲಸದಿಂದ ಸಾಕಷ್ಟು ಆದಾಯ ಇತ್ತು ಎಂದರೆ ಸರಿ. ನಾನು ನಂತರದಲ್ಲಿ ಸೇರಿಸಿರುವ ಆಸ್ತಿಗಳು 1 ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿ ಆಗಿರುತ್ತದೆ ಎಂದರೆ ಸರಿ.

**:: ಪಾಟೀ ಸವಾಲು :: 8 ಮತ್ತು 9 ನೇ ಪ್ರತಿವಾದಿಗಳ ಪರ ಶ್ರೀ.TNM ವಕೀಲರಿಂದ ::**

ದಾವಾ ಶೆಡ್ಯೂಲ್ ಸ್ವತ್ತುಗಳಲ್ಲಿ ಯಾವ ಆಸ್ತಿಗಳು ನಮ್ಮ ಪಿತ್ರಾರ್ಜಿತ ಆಸ್ತಿ ಹಾಗೂ ಯಾವ ಆಸ್ತಿಗಳು 1 ನೇ ಪ್ರತಿವಾದಿಯ ಆಸ್ತಿ ಆಗಿರುತ್ತದೆ ಎಂದು ನನಗೆ ತಿಳಿದಿರುತ್ತದೆ. ದಾವಾ ಐಟಂ 8 ಆಸ್ತಿಯು 1 ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿ ಆಗಿತ್ತು ಎಂದರೆ ಸರಿ. ಸದರಿ ಆಸ್ತಿಯನ್ನು 1 ನೇ ಪ್ರತಿವಾದಿ ಟಿ ಟಿ ಮಂಜುನಾಥ ರವರಿಗೆ ಮಾರಾಟ ಮಾಡಿರುತ್ತಾರೆ ಎಂದರೆ ಸರಿ. ಸಾಕ್ಷಿಯು ಸ್ವತಃ ಮುಂದುವರೆದು ನನ್ನ ತಂದೆ ಹಿಂದೆ ಮಾಡಿದ್ದ ಸಾಲವನ್ನು ತೀರಿಸಲು ಮಾರಾಟ ಮಾಡಿರುತ್ತಾರೆ ಎಂದು ನುಡಿಯುತ್ತಾರೆ. ಸದರಿ ಮಾರಾಟವನ್ನು 1993 ರಲ್ಲಿ ಮಾಡಿರುತ್ತಾರೆ ಎಂದು ನನಗೆ ನೆನಪಿಲ್ಲ. 8 ಮತ್ತು 9 ನೇ ಪ್ರತಿವಾದಿಗಳು ಟಿ ಟಿ ಮಂಜುನಾಥ ರವರಿಂದ ದಾವಾ ಐಟಂ 8 ನ್ನು ಖರೀದಿ ಮಾಡಿರುತ್ತಾರೆ ಎಂದರೆ ಸರಿ. ಸದರಿ ಖರೀದಿಯ ನಂತರದಲ್ಲಿ ಅವರುಗಳು ಆರ್ ಸಿ ಸಿ ಮನೆ ನಿರ್ಮಾಣ ಮಾಡಿ ವಾಸವಾಗಿತ್ತಾರೆ ಎಂದರೆ ನನಗೆ ಗೊತ್ತಿಲ್ಲ. 8 ಮತ್ತು 9 ಪ್ರತಿವಾದಿಗಳು ದಾವಾ ಐಟಂ 8 ನ್ನು 30 ವರ್ಷಗಳ ಹಿಂದೆ ಖರೀದಿ ಮಾಡಿದ ಅಲ್ಲಿ ಮನೆ ನಿರ್ಮಾಣ ಮಾಡಿ ಇಲ್ಲಿಯವರೆಗೂ ಅವರೇ ಅಲ್ಲಿ ವಾಸ ಮಾಡಿಕೊಂಡಿರುತ್ತಾರೆ ಎಂದರೆ ಸರಿ. ಸದರಿಯವರ ಹೆಸರಿನಲ್ಲಿ ಎಲ್ಲಾ ಕಂದಾಯ ದಾಖಲೆ

ಬದಲಾಗಿದ್ದು ಅವರೇ ಕಂದಾಯ ಪಾವತಿ ಮಾಡಿಕೊಂಡು ಬಂದಿರುತ್ತಾರೆ ಎಂದರೆ ಸರಿ. ಆದ್ದರಿಂದ ದಾವಾ ಐಟಂ 8 ಆಸ್ತಿಯಲ್ಲಿ ನನಗೆ ಅಥವಾ ಉಳಿದ ಕುಟುಂಬದ ಸದಸ್ಯರಿಗೆ ಯಾವುದೇ ಹಕ್ಕು ಉಳಿದಿರುವುದಿಲ್ಲ ಎಂದರೆ ಸರಿ. 4 ನೇ ಪ್ರತಿವಾದಿ ಮಾತು ಕೇಳಿ ದುರುದ್ದೇಶದಿಂದ ದಾವಾ ಐಟಂ 8 ನ್ನು ಈ ದಾವೆಯಲ್ಲಿ ಸೇರಿಸಿರುತ್ತೇನೆ ಎಂದರೆ ಸರಿಯಲ್ಲ.

**:: ಮರು ವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸ ಇ ಎ ಓ

sd/-

ಪ್ರಧಾನ ಸಿ.ಜೆ ಮತ್ತು ಹೆ. ಜೆ.ಎಂ.ಎಫ್.ಸಿ

ತರೀಕೆರೆ.

ಸಾಕ್ಷಿಯ ಸಹಿ: